**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿ.ಸಿ. ನಂ. 101/2018**

| | | | |
|---|---|---|---|
| **ಹೆಸರು** | **:** | **ಮಹೆಬೂಬ ಸಾಬ** | **ದೋ.ಸಾ. 5** |
| **ತಂದೆಯ ಹೆಸರು** | **:** | **ಲಾಲ ಅಹ್ಮದ** | **ಪ್ರಾ.ಸಾ. 9** |
| **ವಯಸ್ಸು** | **:** | **62 ವರ್ಷ** | **ದಿನಾಂಕಃ 07-02-2023** |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ರುದನೂರ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ನ್ಯಾಯಾಲಯದ ಮುಂದೆ ಇರುವ 1 ಮತ್ತು 2 ನೇ ಅರೋಪಿತರು ನನಗೆ ಗೊತ್ತು. ಪ್ರಾಸಾ-3 ನನಗೆ ಗೊತು. ಪ್ರಾಸಾ-1 ರಿಂದ 3 ರವರು ನನಗೆ ಗೊತ್ತು. ಚಾಸಾ-4 ನನಗೆ ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಯಾವದೇ ಮಾಹಿತಿ ಇಲ್ಲ. ಪ್ರಾಸಾ-3 ಮತ್ತು ಆರೋಪಿತರ ಮಧ್ಯ ಜಗಳ ಆಗಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ನಾನು ಪೊಲೀಸರ ಮುಂದೆ ಯಾವದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಕೊಟ್ಟಿರುವ ಹೇಳಿಕೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕಃ 10-07-2017 ರಂದು ರಾಯಕೋಡ ಗ್ರಾಮದ ಬಸಯ್ಯ ಸ್ವಾಮಿ ಇವರ ಮಗಳಾದ ಪ್ರಾಸಾ-3 ರವರ ಜೊತೆ ಮದುವೆ ಆಗಿರುತ್ತದೆ ಎಂದರೆ ಸರಿ. ಮದುವೆ ಆಗಿ ಒಂದು ತಿಂಗಳಗಳಷ್ಟೆ ಗಂಡ ಹೆಂಡತಿ ಸರಿಯಾಗಿದ್ದರು ಎಂದರೆ ಸರಿ. ಉಳಿದ ಸಂಗತಿಗಳು ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಗೆ ಓದಿ ಹೆಳಿರುತ್ತಾರೆ ಸಾಕ್ಷಿ ಆ ಸಂಗತಿಗಳನ್ನೆಲ್ಲ ನಿರಾಕರಿಸಿದ್ದು ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈ ರೀತಿ ನಾನು 13-10-2017 ರಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಗೈರು ಹಾಜರು ಆಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.</u>**

**ಮರುವಿಚಾರಣೆಃ ಇಲ್ಲಾ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**